WPP-47

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೭	ಬೆಂಗಳೂರು, ಗುರುವಾರ, ಮೇ ೧೭, ೨೦೧೨ (ವೈಶಾಖ ೨೭, ಶಕ ವರ್ಷ ೧೯೩೪)	ಸಂಚಿಕೆ ೨೦

ಭಾಗ – ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

IN THE COURT OF THE IV ADDITIONAL CITY CIVIL JUDGE, MAYOHALL UNIT, BANGALORE
G & W.C. NO. 25001/2012

PETITIONER : SMT. M. PARIMALAKANTHI D/o Late V. Murugeshan, Aged about 58 years, R/at No. 106/1, 1st Floor, 19th 'B' Cross, Lakshmipuram, Ulsoor, Bangalore-560 008.

V/S

RESPONDENT : NIL

PUBLIC NOTICE

Notice is hereby given that a petition has been made to this court under section 7,8 and 10 of the Guardian and Wards Act seeking appointment of petitioner as Guardian to the person and property (described in the schedule below) of the minor LUCAS CHIRSTYY, S/o. SMT. RAMYA. SMT. RAMYA died on 12-6-2010.

Be it known that no caveat has been entered and the said petition is posted for hearing on 13-6-2012. All persons claiming to have any interest may come and see the proceedings before appointing the petitioner as Guardian to the person and property of aforesaid minor LUCAS CHIRSTYY who born on 7-4-2000.

All that monthly pension from the P.F. Office, "Bhavisya Nidhi Bhavan", No. 13, Rajaram Mohanroy Road, Bangalore-560 025, of deceased SMT RAMYA, for which minor LUCAS CHIRSTYY is entitled to.

Given under my hand and seal of the court on this the 21st day of April 2012 at Bangalore.

By order of the Court
Assistant Registrar,
City Civil Court, Mayo Hall, Bangalore

P.D. 53

FORM IV

(see rule 9)

NOTICE

IT IS HEREBY NOTIFIED THAT THE UNDERSIGHNED HAS CHANGED HIS NAME FROM **BASAVARAJ BHAGAVANTAPPA MOPAGAR** (ORIGINAL NAME) TO **BASAVARAJ BHAGAVANTAPPA DORANALLI** (ASSUMED NAME)

P.D. 59 **BASAVARAJ BHAGAVANTAPPA MOPAGAR**

IN THE COURT OF THE HON'BLE CITY CIVIL & SESSION JUDGE AT BANGALORE (MAYOHALL UNIT)

CCH-21

G & W.C. No. 25002/2012

IN THE MATTER OF MASTER A. GOKULA MINOR

BETWEEN :

Smt. Chowdamma,
No. 63/2, Muthappa House,
4th Main Road, HGH Layout,
Ganganagar, Bangalore-560032. : **Petitioner**

AND

Nil : **Respondent**

PUBLIC NOTICE

Whereas, the above named petitioner has filed the above petition under Section 7,8,9, 10 & 29 of the Guardians and Wards Act, 1890. Seeking to appoint the petitioner as guardian of the minor Master A. Gokula and also to sell his share in the under mentioned schedule property of the deceased Ashwath to discharge the liability of the deceased.

Take notice that above petition is set down for hearing on 4-6-2012 at about 11.00 am in the CCH-21, Mayohall Unit, Bangalore for filing objection if any, by anybody either by person or through their advocate do so in the above matter. If no objections are filed, the said petition will be proceeded in accordance with law.

SCHEDULE

All that the piece and parcel of the residential property bearing New BBMP No. 82, PID No. 98-53-82, measures 30 ft X 40 ft in total 1200 Sq. ft. situated at 4th Main Road, HGH Layout, Ganganagar Ward No. 98, BBMP Bangalore North Taluk and bounded on :

East by	:	Property belong to Sri Munimuthappa
West by	:	Private Property
North by	:	Property belongs to Sri C. Narayanaswamy
South by	:	Conservancy Road

Along with completed Ground, First & Second floor and incomplete Third floor of RCC roofed building thereon with all civic amenities.

Given under my hand and the seal of the court on this 12th day of April, 2012.

By order of the Court
Assistant Registrar,
City Civil Court, Mayo Hall Unit, Bangalore.

P.D. 52

IN THE COURT OF THE CITY CIVIL JUDGE, MAYO HALL UNIT, AT BANGALORE

G & W.C. No. 25003/2012

IN THE MATTER OF MISS. SARAYU R ACHARYA, MINOR

BETWEEN :

Petitioner :

Mrs Lakshmi R Acharya, Wife of Late Mr. Ranjan Narahari Acharya, Aged about 49 years, Residing at Villa No. 2, Villa Del Mar, Sarjapur Road, Bangalore-560102, Mother and Natural Guardian of the Minor Child Miss Sarayu R Acharya.

V/s.

Respondent : Nil.

PUBLIC NOTICE

Notice is hereby given that a Petition has been made to this Court under Section 8 of the Hindu Minority and Guardianship Act, 1956 seeking leave of the Hon'ble Court to sell 50% share of the Minor Child Miss. Sarayu R Acharya in the Schedule Property appearing hereunder.

Be it known that no Caveat has been entered and the said Petition is posted on 31-5-2012 at 11 'o' Clock A.M. Any person/s claiming to have any interest may come and participate in the proceedings before the permission is given to sell the share of the Minor Child Miss. Sarayu R Acharya.

SCHEDULE PROPERTY

1/30th undivided right and interest in the total land admeasuring 15315 sq ft and 2418 sq ft total land area of 79,662 sq ft of land comprising in Khatha 1/2, and 2/2 out of Land bearing Survey No. 1 and situated at Ambalipura Village, Varthur Hobli, Sarjapura Road, Bangalore South Taluk, comes under new corporation limits together with Villa No. 2 Corporation assigned No. 530/591/2 along with 2 cars with equal share and interest measuring and bounded as on the :

East By :	30 feet wide Road
West By :	Private Property ;
North By :	Villa No. 1
South By :	Villa No.3.

Given under my hand and seal of the Court, this the 21st day of April, 2012.

By order of the Court
Assistant Registrar,
City Civil Court, Mayo Hall Unit, Bangalore.

P.D. 51

ಕರ್ನಾಟಕ ಲೋಕಸೇವಾ ಆಯೋಗ

ತಿದ್ದುಪಡಿ ಅಧಿಸೂಚನೆ

ಸಂಖ್ಯೆ : ಇಪ(2) 027/2012-13/ಪಿಎಸ್‌ಸಿ, ಬೆಂಗಳೂರು, ದಿನಾಂಕ : 27-04-2012

2011ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ : 27-10-2011ರ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದ್ದು, ಸದರಿ ಅಧಿವೇಶನದಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳು ಹಾಗೂ ಕಾನೂನು ಪದವಿಗಳ ಆಧಾರದ ಮೇಲೆ ವಿನಾಯಿತಿ ನೀಡಬೇಕಾಗಿರುವ ಪ್ರಕರಣಗಳನ್ನು ನಿಯಮಾನುಸಾರ ಪರಿಗಣಿಸಿ ತತ್ಸಂಬಂಧ ಅರ್ಹ ಅಭ್ಯರ್ಥಿಗಳ ಫಲಿತಾಂಶವನ್ನು ತಿದ್ದುಪಡಿಯ ಮೂಲಕ ಸಂಬಂಧಿತರ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ.

ಅಪೆಂಡಿಕ್ಸ್ "ಬಿ"

ಬೆಂಗಳೂರು ಕೇಂದ್ರ

ಜನರಲ್ ಲಾ ಭಾಗ-1

ಜನರಲ್ ಲಾ ಭಾಗ-1ರ ಪತ್ರಿಕೆ-2ರಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ : 17613ನ್ನು ಸೇರಿಸಿ ಓದಿಕೊಳ್ಳುವುದು.

ಅಪೆಂಡಿಕ್ಸ್ "ಬಿ"

ಉಡುಪಿ ಕೇಂದ್ರ

ಜನರಲ್ ಲಾ ಭಾಗ-1

ಜನರಲ್ ಲಾ ಭಾಗ-1ರ ಪತ್ರಿಕೆ-2ರಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ : 45147ನ್ನು ಸೇರಿಸಿ ಓದಿಕೊಳ್ಳುವುದು.

ವಿ. ಬಿ. ಪಾಟೀಲ್,
ಕಾರ್ಯದರ್ಶಿ,
ಹಾಗೂ ಇಲಾಖಾ ಪರೀಕ್ಷೆಗಳ ನಿಯಂತ್ರಕರು,
ಕರ್ನಾಟಕ ಲೋಕಸೇವಾ ಆಯೋಗ.

ಪಿ.ಆರ್. 78

PUBLIC NOTICE

BEFORE THE MOTOR ACCIDENT CLAIMS TRIBUNAL, CITY CIVIL & SESSIONS COURT, AHMEDABAD

Exh. 42

M.A.C.T 1205 OF 2008

APPLICANT : Alpa Patanjanli Patel

Versus

OPPONENT 3.- M. Muniappa S/o. Madhurappa,
128, Laxmiprupa, Vidhanpipura, Po-Bangalore, Bangalore.

WHEREAS, the applicant has filed claim petition in this Tribunal for compensation of Rs. 50,000/-U/s. 166 of M.V. Act on 18-12-2008 for accident caused by Honda City Car No. KA-01-MC-5420 & Tata Sumo Car No. ka-04-b-8873 at about 2-00 pm. On Dt. 19-08-2007 at opp-S.L.V. Bric Fectory, Nr. Nilas Gate, Nanda Road, Behna Halli, and notice of this Tribunal against above opponent has been returned unserved.

This PUBLIC NOTICE is issued by the Tribunal for above Opponent. Take Notice of this claim that it will be heard by the Tribunal on 25-06-2012 at 10-30 a.m. If you does not appear and file your defence, the claim will be decided ex parte against you.

GIVEN UNDER MY HAND AND SEAL OF THE TRIBUNAL THIS 23RD DAY OF APRIL, 2012.

DRAWN BY	CHECKED BY	Dy. Registrar,
S. D. MOTWANI	**S. N. SHELAT**	City Civil & Sessions Court,
Assistant	Superintendent	Ahmadabad

P.D. 48

IN THE COURT OF THE IV ADDL. CITY CIVIL JUDGE AT BANGALORE.

P & S C No. 25036/2011

BETWEEN :

1. Dr. K. Akhilesh Narayan, aged about 28 years, S/o late K.A. Krishnan
2. Smt. Jayanthi Krishnan age about 64 years, W/o late K. A. Krishnan, Both residing at Flat No. 202, II Floor, SNS Prem Nivas, No. 1, Union Street, Shivajinagar, Bangalore-560 001.

AND …. Petitioners

NIL …. Respondent

PUBLIC NOTICE

Notice is hereby given that a Petition is filed before the above mentioned Court under section 372 of the Indian Succession Act, to issue Succession Certificate to the aforesaid Petitioners in respect of the Shares described in the Schedule below, which are standing in the name of deceased K.A. Krishnan, who died on 14-03-2007.

Be it known that no caveat has been entered and the said petition is posted for hearing on 06-06-2012 at 11 am.

If any Person has any objections for granting the succession certificate to the aforesaid Petitioners, may participate in the proceedings before granting of Succession Certificate.

SCHEDULE

The Share Certificates of the Asian Paints (India) Ltd.,

Sl. No.	Certificate No.	No. of Shares	Amount of each share
1.	00808363	307	Rs. 10.00
2.	752020	230	Rs. 10.00
3.	433342	1	Rs. 10.00
4.	433341	3	Rs. 10.00
5.	433340	10	Rs. 10.00
6.	433339	20	Rs. 10.00
7.	433338	3	Rs. 10.00
8.	433337	5	Rs. 10.00
9.	433336	50	Rs. 10.00
10.	433335	50	Rs. 10.00
11.	433334	50	Rs. 10.00
12.	128408	20	Rs. 10.00
13.	128407	20	Rs. 10.00
14.	81446	30	Rs. 10.00
15.	30342	50	Rs. 10.00
			Total – 849 Shares

Given under my hand and seal of the Court this 20th day of April 2012.

By order of the Court,
Assistant Registrar,
City Civil Court, Bangalore.

P.D. 46

IN THE COURT OF THE 4TH ADDITIONAL CITY CIVIL AND SESSIONS JUDGE, MAYOHALL UNIT, BANGALORE, CCH 21

P & S.C.No. 25017/2012

Petitioner :

1. N. Venugopal S/o Late Narayanappa, Hindu, aged 58 years, Residing at No. 43/4,3rd Cross, Heerachand Layout, Jeevanahalli, Cox town, Bangalore-560005
2. N. Anantha S/o late M. Narayanappa, Hindu, aged about 53 years, Residing at No. 816, 3rd A Cross, H.R.B.R. Layout, 1st Block, Kalyanagar, Bangalore-560 043.

- : Vs :-

Respondents :-

1. Smt. Chandramma, w/o G. M. Jayaram, aged about 63 years, Residing at No. 11, 11th Cross, Muninanjappa, Layout Ramamurthy Nagar Bangalore-560 043.
2. Smt. N. Padma, w/o Sri Putte Gowda, Hindu, aged about 61 years, residing at No. 501, 5th Cross, 2nd block, R.T. Nagar, Bangalore-560 032.
3. Smt. N. Shantha w/o Sri Munirathna, Hindu, aged about 53 years, residing at No. 11, 11th Cross, Muninanjappa layout, M.S. Nagar, Ramamurthy Nagar, Bangalore-560 043.
4. N. Meenakshi, w/o M. Lakshminarayana Reddy, Hindu, aged about 49 years, residing at no 1081, 5th Block 6th Cross H.M.T. Layout, Nagasandra post, Bangalore.
5. Smt. N. Prema w/o Sri Chandrappa, Hindu, aged about 46 years, residing at Karuna Nilaya, behind P.V.S. Convent, Channasandra, Bangalore-560 067.
6. Sri V. Ramamurthy s/o late M. Venkatappa, Hindu aged about 73 years, residing at no. 164, 3rd Cross, Jeevanahalli, Cox town, Bangalore-560 005.
7. Sri V. Muniraju s./o Late M. Venkatappa, Hindu aged about 65 years, residing at No. 22 park road, Jeevanahalli, Cox town Bangalore-560005.
8. V. Sreenivasa s/o late M. Venkatappa, Hindu aged about 65 years, residing at No. 22 park road Jeevanahalli, Cox town Bangalore-560 005.
9. V. Krishnamurthy (deceased) by LR's (a) Smt. T. Shanthamma, Hindu aged about 58 years, (b) K. Suresh, Hindu, aged about 41 years (c) K. Sreenath, Hindu, aged about 38 years, 9(a) wife (b) & (c) Children of late V. Krishnamurthy all residing at no. 164/3, 3rd Cross, Jeevanahalli, Cox town, Bangalore-560 005.
10. Smt. V. Saraswathi w/o Krishnappa & D/o late M. Venkatappa, Hindu, aged about 58 years, residing at No. 109, 3rd Cross, Vinayaka Layout, Whitefield, Bangalore.

PUBLIC NOTICE

Notice is hereby given that a petition has been made to this court by the petitioners above named under section 372 of the Indian Succession Act 1925, for grant of succession certificate in respect of the properties described in the schedule below, of the deceased M. Narayanappa who died on 10-02-2001 at Bangalore.

Be it known that no caveat has been entered and the said case is posted for hearing on 19—6-2012 at 11-00 `O' Clock, Any person claiming to have may interest any come and participate in the proceedings before the grant of succession certificate.

SCHEDULE `A'

The properties of the deceased within the jurisdiction of this Hon'ble court.

1. Amount in Fixed Deposit in Union Bank of India, Bangalore, together with Rs. 14,89,465-00 accrued interest.
2. Amount in Fixed Deposit in Vijaya Bank, Bangalore together with accrued Rs. 13,70,734-00 interest.

SCHEDULE ``B''

1. Amount in Fixed Deposit yielding interest in the Union Bank of India, Bangalore here and to the account of M. Narayanappa and the petitioner together with accrued interest in MFA No. 1602/2002-CROB No. 51/2005 and C.C.C. No. 680/2006 all on the files of Rs. 14,89,465-00 Hon'ble High court of Karnataka Bangalore.

2. Amount in Fixed Deposit in Vijaya Bank, South end Road Brach, Bangalore in Ex. Case No. 1408/2001 on the files of Addl. City Civil Judge Rs. 13,70,734-00, Bangalore by and to the account of M. Narayanappa followed by his L.R. together with accrued interest.

Given under my hand and seal of the court this the 12th day of April 2012.

By order of the court,
Assistant. Registrar,
City Civil Court, Mayohall Unit, Bangalore.

P.D. 47

FORM I

DEPARTMENT OF EDUCATION

BLOCK EDUCATION OFFICE HAVERI

NOTIFICATION DATED 26TH APRIL 2012

Shri/Smt. **SAJEEDABEGAM IMAMSAB KHAMAGAL** working as Assistant Teacher in the Education Department of / Office of Block Education Office, Haveri is permitted to change his/her name to **SAJEEDABEGAM ATAULLA CHOPADAR.**

P.D. C/N 61 **signature and Disignation of the Appointing Authority**

ಪೊಲೀಸ್ ಇಲಾಖೆ

ಜಿಲ್ಲಾ ಪೊಲೀಸ್ ಕಾರ್ಯಾಲಯ, ಹಾವೇರಿ ಜಿಲ್ಲೆ

ನಮೂನೆ–1

(9ನೇ ನಿಯಮ ನೋಡಿ)

ಅಧಿಸೂಚನೆ

ಸಿಪಿಸಿ–921 ಹನುಮಂತಪ್ಪ ತಿಮ್ಮಪ್ಪ ಭಜಂತ್ರಿ, ಹಲಗೇರಿ ಪೊಲೀಸ್ ಠಾಣೆರವರಿಗೆ ಅವರ ಹೆಸರನ್ನು **ಬಿ ಟಿ ಆನಂದ್** ಎಂದು ಬದಲಾಯಿಸಲು ಅನುಮತಿ ನೀಡಲಾಗಿದೆ.

ಪೊಲೀಸ್ ಅಧೀಕ್ಷಕರು,
ಹಾವೇರಿ ಜಿಲ್ಲೆ, ಹಾವೇರಿ.

ಪಿ.ಡಿ. 60

ಅರಣ್ಯ ಇಲಾಖೆ

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಚಾಮರಾಜನಗರ ವೃತ್ತ, ಚಾಮರಾಜನಗರ

ಅಧಿಸೂಚನೆ

ಸಂಖ್ಯೆ: ಎ2–ಸಿಬ್ಬಂದಿ–ಅವೀನೇ(ಬ್ಯಾ.ಲಾ.)–ವಿವ–3/2012–13 ದಿನಾಂಕ 08–05–2012

ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

ಅರಣ್ಯ ಇಲಾಖೆಯ ಚಾಮರಾಜನಗರ ವೃತ್ತ ವ್ಯಾಪ್ತಿಗೆ ಒಳಪಡುವ ಬಂಡೀಪುರ ಹುಲಿ ಯೋಜನೆ ವಿಭಾಗದ ಅರಣ್ಯ ವ್ಯಾಪ್ತಿಯಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ (ಬ್ಯಾಕ್‌ಲಾಗ್) 45 ಸಂಖ್ಯೆಯ ಅರಣ್ಯ ವೀಕ್ಷಕ ಹುದ್ದೆಗಳಿಗೆ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003 ರಂತೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಈ ಅಧಿಸೂಚನೆಯೊಂದಿಗೆ ಅಡಕಗೊಳಿಸಿ ಪ್ರಕಟಿಸಲಾಗಿದೆ. ಅರ್ಜಿ ನಮೂನೆಯ ಮಾದರಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ ವೃತ್ತ, ಚಾಮರಾಜನಗರ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಂಡೀಪುರ ಹುಲಿ ಯೋಜನೆ ವಿಭಾಗ, ಬಂಡೀಪುರ ಇವರ ಕಚೇರಿಗಳಿಂದಲೂ ಪಡೆಯಬಹುದು. ಅರ್ಜಿ ನಮೂನೆಗಳು ಮಾರಾಟಕ್ಕೆ ಲಭ್ಯವಿರುವುದಿಲ್ಲ.

ಲಕೋಟೆಯ ಮೇಲೆ **"ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸಿರಬೇಕು. ಅರ್ಜಿಗಳನ್ನು ಅಂಚೆ ಮೂಲಕ ಅಥವಾ ಮುದ್ದಾಂ ಆಗಿ ಈ ಕೆಳಗೆ ತಿಳಿಸಿರುವ ವಿಳಾಸಕ್ಕೆ ಸಲ್ಲಿಸಬೇಕು.

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ,
ಚಾಮರಾಜನಗರ ವೃತ್ತ,
ಚಾಮರಾಜನಗರ.

ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 31–05–2012 ರಂದು ಅಪರಾಹ್ನ 2.30 ಗಂಟೆವರೆಗೆ ಆಗಿರುತ್ತದೆ. ಕೊನೆಯ ದಿನಾಂಕ ಹಾಗೂ ವೇಳೆಯ ನಂತರ ಸ್ವೀಕರಿಸಲಾಗುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

1.0 ಅರಣ್ಯ ವೀಕ್ಷಕ ಹುದ್ದೆ:– ಒಟ್ಟು 45 ಹುದ್ದೆಗಳು.

ವೇತನ ಶ್ರೇಣಿ: ರೂ. 10400–200–12000–250–13000–300–14200–350–15600–400–16400

1.1 ಬಂಡೀಪುರ ಹುಲಿ ಯೋಜನೆ ವಿಭಾಗದ 45 ಹುದ್ದೆಗಳ ಮೀಸಲಾತಿ ವರ್ಗೀಕರಣ:

1.2 ಬಂಡೀಪುರ ಹುಲಿ ಯೋಜನೆ ವಿಭಾಗ ವ್ಯಾಪ್ತಿಯಲ್ಲಿ ಬರುವ ಪೂರ್ಣ ಅಥವಾ ಭಾಗಶಃ ತಾಲೂಕು ಪ್ರದೇಶಗಳಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿರುವ ಹಾಗೂ ಈ ವಿಭಾಗ ವ್ಯಾಪ್ತಿಯ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಠ ಪಂಗಡಕ್ಕೆ ಸೇರಿದ ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗರು, ಯರವ, ಗೌಡ್ಲು, ಇರುಳರ್, ಇರುಲಿಗಾ, ಕೊರಗಾ, ಮೆಲಕುಡಿ, ಮಲೈಕುಡಿ, ಮಲೇರು, ಮೇದಾ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಒಟ್ಟು 45 ಹುದ್ದೆಗಳನ್ನು ಈ ಮೇಲ್ಕಾಣಿಸಿದ ಪರಿಶಿಷ್ಠ ಪಂಗಡದ ಬುಡಕಟ್ಟು ಜನಾಂಗಗಳ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.

2.0 ಅರ್ಹತೆ ಮತ್ತು ನಿಬಂಧನೆಗಳು:

2.1 ವಿದ್ಯಾರ್ಹತೆ: ಅಧಿಸೂಚನೆಯ ದಿನಾಂಕದೊಳಗೆ ಅಭ್ಯರ್ಥಿಯು 7ನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

3.0 ವಯೋಮಿತಿ: ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು **ಕನಿಷ್ಠ 18 ವರ್ಷ** ವಯಸ್ಸನ್ನು ಪೂರೈಸಿರತಕ್ಕದ್ದು.

ಅಧಿಸೂಚನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ ವಿವರಗಳು ಕೆಳಗಿನಂತಿದೆ:–

3.1	ಪರಿಶಿಷ್ಠ ಪಂಗಡ	ಗರಿಷ್ಠ ವಯೋಮಿತಿ 33 ವರ್ಷಗಳು

4.0 ಅರ್ಜಿ ಸಲ್ಲಿಸುವ ವಿಧಾನ

ನಿಗದಿತ ನಮೂನೆಯಲ್ಲಿರುವ ಅರ್ಜಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಪೂರ್ಣವಾಗಿ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿಯನ್ನು ಈ ಮೇಲೆ ತಿಳಿಸಿದ ವಿಳಾಸಕ್ಕೆ ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಸಲ್ಲಿಸುವುದು. ಅರ್ಜಿಯ ಜೊತೆಗೆ: (1) 7ನೇ ತರಗತಿ ತೇರ್ಗಡೆ ಹೊಂದಿದ ಬಗ್ಗೆ ಅಂಕಪಟ್ಟಿ; (2) ಜಾತಿ ಪ್ರಮಾಣ ಪತ್ರ; (3) ಸ್ವವಿಳಾಸದ ಬಗ್ಗೆ ದಾಖಲೆ ಇವುಗಳ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಬೇಕು.

5.0 ಸ್ವೀಕೃತ ಅರ್ಜಿಗಳ ಪರಾಮರ್ಶೆ/ನೇಮಕಾತಿ ವಿಧಾನ

ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003ರ ಅನ್ವಯ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಅರಣ್ಯ ವೀಕ್ಷಕ ಹುದ್ದೆಗೆ ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಸ್ವೀಕರಿಸಲಾಗುವ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿ ಮತ್ತು ದಾಖಲೆಗಳ ಪ್ರತಿಯಲ್ಲಿರುವ ಮಾಹಿತಿಗಳ ಆಧಾರದ ಅನ್ವಯ ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಸೂಚಿತ ದಿನಾಂಕದಂದು ಹಾಜರಾಗಲು ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು ಅರ್ಹ ಅಭ್ಯರ್ಥಿಗಳು ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರದ ಎದುರು ಹಾಜರುಪಡಿಸಬೇಕು.

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳಿಗೆ ಪೂರಕ ಮತ್ತು ಸರಿಯಾದ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ ಅಭ್ಯರ್ಥಿಗಳು ಮಾತ್ರ ಶಾರೀರಿಕ ಮಾನದಂಡದ ಕುರಿತು ನಿಗದಿಪಡಿಸಿದ ದೈಹಿಕ ತಾಳ್ವಿಕೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದವರು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ. ಆಯಾ ದಿನಗಳಂದು ನಡೆಯುವ ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳ ಫಲಿತಾಂಶವನ್ನು ಆಯಾ ದಿನದಂದು ನೇಮಕಾತಿ ಪ್ರಾಧಿಕಾರವು ಆಯಾ ಪರೀಕ್ಷಾ ಕೇಂದ್ರದಲ್ಲಿ ಪ್ರಕಟಪಡಿಸುವರು.

6.0 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ, ಮತ್ತು ಲಿಖಿತ ಪರೀಕ್ಷೆಗಳು:

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ ಮತ್ತು ಲಿಖಿತ ಪರೀಕ್ಷೆಗಳನ್ನು ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರದಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಸೂಚಿತ ದಿನಾಂಕಗಳಂದು ನಡೆಸಲಾಗುವುದು.

6.1 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ:

ಅರ್ಹ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿ/ವಿವರಗಳಿಗೆ ಪೂರಕವಾಗಿ ವಯಸ್ಸು, (ಜನ್ಮ ದಿನಾಂಕ ತಿಳಿಯಲು ಅಂಕಪಟ್ಟಿ ಅಥವಾ ಶಾಲಾ ದಾಖಲಾತಿ ಪ್ರಮಾಣ ಪತ್ರಗಳು) ಶೈಕ್ಷಣಿಕ ಅರ್ಹತೆ, ಮೀಸಲಾತಿ, ಇತ್ಯಾದಿ ಬಗ್ಗೆ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಸೂಚಿತ ದಿನಾಂಕದಂದು ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರ ಇವರ ಎದುರು ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕು. ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ. ಅಭ್ಯರ್ಥಿಯು ತನ್ನ ಅರ್ಜಿ ನಮೂನೆಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು. ಒಂದು ವೇಳೆ ನಮೂದಿಸಿರುವ ಮಾಹಿತಿಗೆ ವ್ಯತಿರಿಕ್ತ ದಾಖಲೆ/ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ದಾಖಲೆ/ಪ್ರಮಾಣ

ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಬದಲಾವಣೆ ಮಾಡಲಾಗುವುದಿಲ್ಲ. ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.2 **ದೈಹಿಕ ತಾಳ್ವಿಕೆ ಪರೀಕ್ಷೆ:–**

ಪುರುಷ ಅಭ್ಯರ್ಥಿಗಳಿಗೆ	:	1600 ಮೀಟರ್ ಓಟ	06 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು.
ಮಹಿಳಾ ಅಭ್ಯರ್ಥಿಗಳಿಗೆ	:	1000 ಮೀಟರ್ ಓಟ	05 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು.

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಗಣಿಸಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.3 ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ:–

ಕ್ರ. ಸಂ.	ಐಟಂ	ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ	
		ಪುರುಷ ಅಭ್ಯರ್ಥಿಗಳಿಗೆ	**ಮಹಿಳಾ ಅಭ್ಯರ್ಥಿಗಳಿಗೆ**
1	100 ಮೀಟರ್ ಓಟ	15 ಸೆಕೆಂಡುಗಳು	18.5 ಸೆಕೆಂಡುಗಳು
2	ಎತ್ತರ ಜಿಗಿತ	1.20 ಮೀಟರ್	0.90 ಮೀಟರ್
3	ಉದ್ದ ಜಿಗಿತ	3.80 ಮೀಟರ್	2.50 ಮೀಟರ್
4	ಶಾಟ್‌ಪುಟ್	5.60 ಮೀಟರ್	3.76 ಮೀಟರ್
5(ಎ)	800 ಮೀಟರ್ ಓಟ	2 ನಿಮಿಷ 50 ಸೆಕೆಂಡುಗಳು	---
5(ಬಿ)	200 ಮೀಟರ್ ಓಟ	---	40 ಸೆಕೆಂಡುಗಳು

ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದಬೇಕು. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.4 ದೇಹದಾರ್ಢ್ಯತೆ ಪರೀಕ್ಷೆ:

ಶಾರೀರಿಕ ಮಾನದಂಡಗಳು: ಶಾರೀರಿಕ ಮಾನದಂಡಗಳನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

ಪುರುಷ ಅಭ್ಯರ್ಥಿಗಳಿಗೆ:	
ದೇಹದಾರ್ಢ್ಯತೆ	**ಮೇಲೆ ಹೇಳಿರುವ ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ**
ಎತ್ತರ:	ಕನಿಷ್ಠ 152 ಸೆ.ಮೀ.
ಎದೆ ಸುತ್ತಳತೆ:	ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ.
ಎದೆ ಕನಿಷ್ಠ ಹಿಗ್ಗುವಿಕೆ:	5 ಸೆ.ಮೀ.
ಮಹಿಳಾ ಅಭ್ಯರ್ಥಿಗಳಿಗೆ:	
ದೇಹದಾರ್ಢ್ಯತೆ	
ಎತ್ತರ:	ಕನಿಷ್ಠ 145 ಸೆ.ಮೀ.
ಎದೆ ಸುತ್ತಳತೆ:	ಅನ್ವಯಿಸುವುದಿಲ್ಲ
ಕನಿಷ್ಠ ತೂಕ:	38 ಕೆ.ಜಿ.

6.5 ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವವರು ಆಯ್ಕೆಗೆ ಅನರ್ಹರು:–

1. ತಾಗು ಮಂಡಿಗಳು (knock knees)
2. ಬಾಗಿದ ಕಾಲುಗಳು (Bow legs)

3. ಚಪ್ಪಟೆ ಪಾದ (Flat feet)
4. ನರ ಊತವಿರುವವರು (Varicose Veins)
5. ಮಾತನಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (impaediment in speech and hearing)
6. ಪುರುಷ ಅಭ್ಯರ್ಥಿಗಳಿಗೆ ಅಂಡವಾಯು (hydrocele in men)
7. ಬಣ್ಣ ಕುರುಡು/ಇರುಳು ಕುರುಡು (vision/colour blindness/night blindness)

6.6 ದೃಷ್ಟಿ ಸಾಮರ್ಥ್ಯ

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

ದೂರ ದೃಷ್ಟಿ (Distant vision)			ಸಮೀಪ ದೃಷ್ಟಿ (Near vision)		
ದೋಷರಹಿತ ಕಣ್ಣು (Better eye)	ಅಥವಾ	ದೋಷಪೂರಿತ ಕಣ್ಣು (Worse eye)	ದೋಷರಹಿತ ಕಣ್ಣು (Better eye)	ಅಥವಾ	ದೋಷಪೂರಿತ ಕಣ್ಣು (Worse eye)
6/6 ಮೀಟರ್	ಅಥವಾ	6/9 ಮೀಟರ್	0/6 ಮೀಟರ್	ಅಥವಾ	0/8 ಮೀಟರ್

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

6.7 ಶ್ರವಣಶಕ್ತಿ

ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ಸ್ ಟೆಸ್ಟ್
2. ವೆಬ್ಬರ್ಸ್ ಟೆಸ್ಟ್
3. ಟೆಸ್ಟ್ ಫಾರ್ ವರ್ಟಿಗೋ

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

ಈ ಎಲ್ಲಾ ಹಂತದ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆಯುತ್ತಾರೆ.

7.1 ಲಿಖಿತ ಪರೀಕ್ಷೆ:

ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ನೂರು (100) ಅಂಕಗಳದ್ದಾಗಿದ್ದು, ಅರುವತ್ತು (60) ನಿಮಿಷಗಳ ಅವಧಿಯಲ್ಲಿ ಉತ್ತರಿಸಬೇಕಾಗಿದೆ. ಪ್ರಶ್ನೆ ಪತ್ರಿಕೆಯು ಬಹು ಆಯ್ಕೆ (objective multiple choice) ಮಾದರಿಯದಾಗಿದ್ದು, ಇದು ಪ್ರಾಥಮಿಕ ಸಾಮಾನ್ಯ ಜ್ಞಾನ ಹಾಗೂ ಪ್ರಾಥಮಿಕ ಅಂಕಗಣಿತ ವಿಷಯವನ್ನು ಒಳಗೊಂಡಿರುತ್ತದೆ.

7.2 ವಿಶೇಷ ಸೂಚನೆಗಳು:– ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

7.3 7ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23–9–1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

8. ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ, ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

9. ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ:

9.1 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಡಿ" ರಲ್ಲಿ ಪಡೆದಿರಬೇಕು.

9.2 ಪರಿಶಿಷ್ಠ ಪಂಗಡಕ್ಕೆ ಸೇರಿದ ನಿಗದಿಪಡಿಸಿರುವ ಬುಡಕಟ್ಟು ಜನಾಂಗಗಳ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು.

10.0 ಗಮನಿಸಬೇಕಾದ ಮುಖ್ಯ ಅಂಶಗಳು:

10.1 ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

10.2 ನಿಗದಿತ ಅರ್ಜಿಯಲ್ಲಿ ಚಿತ್ತು ಅಥವಾ ಹೊಡೆದು ಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ, ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದ್ದಲ್ಲಿ ಮತ್ತೊಂದು ಅರ್ಜಿಯನ್ನು ತುಂಬಿ ಸಲ್ಲಿಸುವುದು ಅವಶ್ಯಕ. ಭರ್ತಿ ಮಾಡಿದ ಅರ್ಜಿಯಲ್ಲಿನ ವಿವರಗಳು ಸರಿಯಾಗಿದೆಯೇ ಎಂದು ಮನಗಂಡು ಆ ನಂತರ ಅರ್ಜಿಯನ್ನು ಸಲ್ಲಿಸುವುದು ಸೂಕ್ತ.

10.3 ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

10.4 ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳು ಹಾಗೂ ಅರ್ಜಿ ಭರ್ತಿ ಮಾಡುವ ವಿಧಾನದ ಕುರಿತು ಸೂಚಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

10.5 ಅಂಚೆ ಮೂಲಕ ಅಥವಾ ಇನ್ನಿತರೆ ಯಾವುದೇ ವ್ಯವಸ್ಥೆ ಮೂಲಕ ನಿಗದಿಪಡಿಸಿದ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಇಲಾಖೆಯು ಜವಾಬ್ದಾರಿಯಲ್ಲ.

10.6 ನಿಗದಿತ ನಮೂನೆಯಲ್ಲಿಲ್ಲದ ಅಥವಾ ಅಸ್ಪಷ್ಟ/ಅಪೂರ್ಣ ಮಾಹಿತಿ ಭರ್ತಿ ಮಾಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದೆ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10.7 ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

10.8 ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10.9 ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

10.10 ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

10.11 ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

10.12 ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

10.13 ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

10.14 ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

10.15 ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

10.16 ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31–3–2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

10.17 ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

10.18 ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು.

10.19 ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

10.20 ಯಾವುದೇ ಅಭ್ಯರ್ಥಿಗೆ ಪರೀಕ್ಷೆಗೆ ಹಾಜರಾಗಲು ಸೂಚನೆ/ತಿಳುವಳಿಕೆ ಪತ್ರ ಬರದಿದ್ದಲ್ಲಿ ಅಂತಹ ಅಭ್ಯರ್ಥಿಗಳು ಈ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿದ ಪಟ್ಟಿಯನ್ನು ನೋಡತಕ್ಕದ್ದು. ಹೀಗೆ ಪ್ರಕಟಿಸಿದ ಪಟ್ಟಿಯಲ್ಲಿ ಅವರ ಹೆಸರು ಇದ್ದರೆ ಕೆಳಸಹಿದಾರರನ್ನು ಸಂಪರ್ಕಿಸಿ ತಿಳುವಳಿಕೆ ಪತ್ರ / ಸೂಚನೆಯನ್ನು ಪಡೆದುಕೊಳ್ಳಬಹುದು. ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆ ಆಗದಿದ್ದ ಅಭ್ಯರ್ಥಿಗಳಿಗೆ ಈ ಪ್ರಾಧಿಕಾರದಿಂದ ಪ್ರತ್ಯೇಕವಾಗಿ ತಿಳುವಳಿಕೆ ನೀಡಲಾಗುವುದಿಲ್ಲ.

ಚಾಮರಾಜನಗರ,
ದಿನಾಂಕ: 08–05–2012
ಪಿ.ಆರ್. 82

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರ
ಚಾಮರಾಜನಗರ ವೃತ್ತ, ಚಾಮರಾಜನಗರ.

ಅರಣ್ಯ ಇಲಾಖೆ

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು.

ಅಧಿಸೂಚನೆ

ಸಂಖ್ಯೆ: ಎ4–ಇಎಸ್‌ಟಿ–ಅವೀನೇ–ವಿವ–01/2012–13 ದಿನಾಂಕ 14–05–2012

ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

ಅರಣ್ಯ ಇಲಾಖೆಯ ಚಿಕ್ಕಮಗಳೂರು ವೃತ್ತ ವ್ಯಾಪ್ತಿಗೆ ಒಳಪಡುವ ಭದ್ರಾ ವನ್ಯಜೀವಿ ವಿಭಾಗದ ಅರಣ್ಯ ವ್ಯಾಪ್ತಿಯಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ (ಬ್ಯಾಕ್‌ಲಾಗ್) 09 ಸಂಖ್ಯೆಯ ಅರಣ್ಯ ವೀಕ್ಷಕ ಹುದ್ದೆಗಳಿಗೆ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003 ರಂತೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಈ ಅಧಿಸೂಚನೆಯೊಂದಿಗೆ ಅಡಕಗೊಳಿಸಿ ಪ್ರಕಟಿಸಲಾಗಿದೆ. ಅರ್ಜಿ ನಮೂನೆಯ ಮಾದರಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು ಮತ್ತು ಅರಣ್ಯ ಸಂರಕ್ಷಣಾಧಿಕಾರಿ, ಭದ್ರಾ ವನ್ಯಜೀವಿ ವಿಭಾಗ, ಚಿಕ್ಕಮಗಳೂರು ಇವರ ಕಚೇರಿಗಳಿಂದಲೂ ಪಡೆಯಬಹುದು. ಅರ್ಜಿ ನಮೂನೆಗಳು ಮಾರಾಟಕ್ಕೆ ಲಭ್ಯವಿರುವುದಿಲ್ಲ.

ಲಕೋಟೆಯ ಮೇಲೆ **"ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸಿರಬೇಕು. ಅರ್ಜಿಗಳನ್ನು ಅಂಚೆ ಮೂಲಕ ಅಥವಾ ಮುದ್ದಾಂ ಆಗಿ ಈ ಕೆಳಗೆ ತಿಳಿಸಿರುವ ವಿಳಾಸಕ್ಕೆ ಸಲ್ಲಿಸಬೇಕು.

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ,

ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು.

ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 31–05–2012 ರಂದು ಅಪರಾಹ್ನ 2.30 ಗಂಟೆವರೆಗೆ ಆಗಿರುತ್ತದೆ. ಕೊನೆಯ ದಿನಾಂಕ ಹಾಗೂ ವೇಳೆಯ ನಂತರ ಸ್ವೀಕರಿಸಲಾಗುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

1.0 ಅರಣ್ಯ ವೀಕ್ಷಕ ಹುದ್ದೆ:– ಒಟ್ಟು 09 ಹುದ್ದೆಗಳು.

ವೇತನ ಶ್ರೇಣಿ: ರೂ.10400–200–12000–250–13000–300–14200–350–15600–400–16400

1.2 ಭದ್ರಾ ವನ್ಯಜೀವಿ ವಿಭಾಗದ 09 ಹುದ್ದೆಗಳ ಮೀಸಲಾತಿ ವರ್ಗೀಕರಣ:

1.2 ಭದ್ರಾ ವನ್ಯಜೀವಿ ವಿಭಾಗ ವ್ಯಾಪ್ತಿಯಲ್ಲಿ ಬರುವ ಪೂರ್ಣ ಅಥವಾ ಭಾಗಶಃ ತಾಲೂಕು ಪ್ರದೇಶಗಳಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿರುವ ಹಾಗೂ ಈ ವಿಭಾಗ ವ್ಯಾಪ್ತಿಯ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಟ ಪಂಗಡಕ್ಕೆ ಸೇರಿದ ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗರು, ಯರವ, ಗೌಡ್ಲು, ಇರುಳರ್, ಇರುಲಿಗಾ, ಕೊರಗಾ, ಮಲಕುಡಿ, ಮಲೈಕುಡಿ, ಮಲೇರು, ಮೇದಾ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಒಟ್ಟು 09 ಹುದ್ದೆಗಳನ್ನು ಈ ಮೇಲ್ಕಾಣಿಸಿದ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗಗಳ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.

3.0 ಅರ್ಹತೆ ಮತ್ತು ನಿಬಂಧನೆಗಳು:

2.1 ವಿದ್ಯಾರ್ಹತೆ: ಅಧಿಸೂಚನೆಯ ದಿನಾಂಕದೊಳಗೆ ಅಭ್ಯರ್ಥಿಯು 7ನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

3.0 ವಯೋಮಿತಿ: ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು **ಕನಿಷ್ಠ 18 ವರ್ಷ** ವಯಸ್ಸನ್ನು ಪೂರೈಸಿರತಕ್ಕದ್ದು.

ಅಧಿಸೂಚನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ ವಿವರಗಳು ಕೆಳಗಿನಂತಿದೆ:–

3.1	ಪರಿಶಿಷ್ಟ ಪಂಗಡ	ಗರಿಷ್ಠ ವಯೋಮಿತಿ 33 ವರ್ಷಗಳು

4.0 ಅರ್ಜಿ ಸಲ್ಲಿಸುವ ವಿಧಾನ

ನಿಗದಿತ ನಮೂನೆಯಲ್ಲಿರುವ ಅರ್ಜಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಪೂರ್ಣವಾಗಿ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿಯನ್ನು ಈ ಮೇಲೆ ತಿಳಿಸಿದ ವಿಳಾಸಕ್ಕೆ ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಸಲ್ಲಿಸುವುದು. ಅರ್ಜಿಯ ಜೊತೆಗೆ: (1) 7ನೇ ತರಗತಿ ತೇರ್ಗಡೆ ಹೊಂದಿದ ಬಗ್ಗೆ ಅಂಕಪಟ್ಟಿ; (2) ಜಾತಿ ಪ್ರಮಾಣ ಪತ್ರ; (3) ಸ್ವವಿಳಾಸದ ಬಗ್ಗೆ ದಾಖಲೆ ಇವುಗಳ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಬೇಕು.

5.0 ಸ್ವೀಕೃತ ಅರ್ಜಿಗಳ ಪರಾಮರ್ಶೆ/ನೇಮಕಾತಿ ವಿಧಾನ

ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003ರ ಅನ್ವಯ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಅರಣ್ಯ ವೀಕ್ಷಕ ಹುದ್ದೆಗೆ ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಸ್ವೀಕರಿಸಲಾಗುವ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿ ಮತ್ತು ದಾಖಲೆಗಳ ಪ್ರತಿಯಲ್ಲಿರುವ ಮಾಹಿತಿಗಳ ಆಧಾರದ ಅನ್ವಯ ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಸೂಚಿತ ದಿನಾಂಕದಂದು ಹಾಜರಾಗಲು ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು ಅರ್ಹ ಅಭ್ಯರ್ಥಿಗಳು ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರದ ಎದುರು ಹಾಜರುಪಡಿಸಬೇಕು.

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳಿಗೆ ಪೂರಕ ಮತ್ತು ಸರಿಯಾದ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ ಅಭ್ಯರ್ಥಿಗಳು ಮಾತ್ರ ಶಾರೀರಿಕ ಮಾನದಂಡದ ಕುರಿತು ನಿಗದಿಪಡಿಸಿದ ದೈಹಿಕ ತಾಳ್ವಿಕೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದವರು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ. ಆಯಾ ದಿನಗಳಂದು ನಡೆಯುವ ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳ ಫಲಿತಾಂಶವನ್ನು ಆಯಾ ದಿನದಂದು ನೇಮಕಾತಿ ಪ್ರಾಧಿಕಾರವು ಆಯಾ ಪರೀಕ್ಷಾ ಕೇಂದ್ರದಲ್ಲಿ ಪ್ರಕಟಪಡಿಸುವರು.

6.0 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ, ಮತ್ತು ಲಿಖಿತ ಪರೀಕ್ಷೆಗಳು:

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ ಮತ್ತು ಲಿಖಿತ ಪರೀಕ್ಷೆಗಳನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರದಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಸೂಚಿತ ದಿನಾಂಕಗಳಂದು ನಡೆಸಲಾಗುವುದು.

6.1 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ:

ಅರ್ಹ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿ/ವಿವರಗಳಿಗೆ ಪೂರಕವಾಗಿ ವಯಸ್ಸು, (ಜನ್ಮ ದಿನಾಂಕ ತಿಳಿಯಲು ಅಂಕಪಟ್ಟಿ ಅಥವಾ ಶಾಲಾ ದಾಖಲಾತಿ ಪ್ರಮಾಣ ಪತ್ರಗಳು) ಶೈಕ್ಷಣಿಕ ಅರ್ಹತೆ, ಮೀಸಲಾತಿ, ಇತ್ಯಾದಿ ಬಗ್ಗೆ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಸೂಚಿತ ದಿನಾಂಕದಂದು ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರ ಇವರ ಎದುರು ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕು. ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ. ಅಭ್ಯರ್ಥಿಯು ತನ್ನ ಅರ್ಜಿ ನಮೂನೆಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು. ಒಂದು ವೇಳೆ ನಮೂದಿಸಿರುವ ಮಾಹಿತಿಗೆ ವ್ಯತಿರಿಕ್ತ ದಾಖಲೆ/ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಬದಲಾವಣೆ ಮಾಡಲಾಗುವುದಿಲ್ಲ. ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.2 ದೈಹಿಕ ತಾಳ್ವಿಕೆ ಪರೀಕ್ಷೆ:–

ಪುರುಷ ಅಭ್ಯರ್ಥಿಗಳಿಗೆ :	1600 ಮೀಟರ್ ಓಟ	06 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು.
ಮಹಿಳಾ ಅಭ್ಯರ್ಥಿಗಳಿಗೆ :	1000 ಮೀಟರ್ ಓಟ	05 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು.

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಗಣಿಸಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.3 ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ:–

ಕ್ರ ಸಂ.	ಐಟಂ	ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ	
		ಪುರುಷ ಅಭ್ಯರ್ಥಿಗಳಿಗೆ	ಮಹಿಳಾ ಅಭ್ಯರ್ಥಿಗಳಿಗೆ
1	100 ಮೀಟರ್ ಓಟ	15 ಸೆಕೆಂಡುಗಳು	18.5 ಸೆಕೆಂಡುಗಳು
2	ಎತ್ತರ ಜಿಗಿತ	1.20 ಮೀಟರ್	0.90 ಮೀಟರ್
3	ಉದ್ದ ಜಿಗಿತ	3.80 ಮೀಟರ್	2.50 ಮೀಟರ್
4	ಶಾಟ್‌ಪುಟ್	5.60 ಮೀಟರ್ (16 ಎಲ್.ಬಿ)	3.76 ಮೀಟರ್ (8 ಎಲ್.ಬಿ)
5(ಎ)	800 ಮೀಟರ್ ಓಟ	2 ನಿಮಿಷ 50 ಸೆಕೆಂಡುಗಳು	---
5(ಬಿ)	200 ಮೀಟರ್ ಓಟ	---	40 ಸೆಕೆಂಡುಗಳು

ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದಬೇಕು. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.4 ದೇಹದಾರ್ಢ್ಯತೆ ಪರೀಕ್ಷೆ:

ಶಾರೀರಿಕ ಮಾನದಂಡಗಳು: ಶಾರೀರಿಕ ಮಾನದಂಡಗಳನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

ಪುರುಷ ಅಭ್ಯರ್ಥಿಗಳಿಗೆ:	
ದೇಹದಾರ್ಢ್ಯತೆ	**ಮೇಲೆ ಹೇಳಿರುವ ಅರಣ್ಯದಲ್ಲಿ ವಾಸಿಸುವ ಪರಿಶಿಷ್ಠ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ**
ಎತ್ತರ:	ಕನಿಷ್ಠ 152 ಸೆ.ಮೀ.
ಎದೆ ಸುತ್ತಳತೆ:	ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ.
ಎದೆ ಕನಿಷ್ಠ ಹಿಗ್ಗುವಿಕೆ:	5 ಸೆ.ಮೀ.
ಮಹಿಳಾ ಅಭ್ಯರ್ಥಿಗಳಿಗೆ:	
ದೇಹದಾರ್ಢ್ಯತೆ	
ಎತ್ತರ:	ಕನಿಷ್ಠ 145 ಸೆ.ಮೀ.
ಎದೆ ಸುತ್ತಳತೆ:	ಅನ್ವಯಿಸುವುದಿಲ್ಲ
ಕನಿಷ್ಠ ತೂಕ:	38 ಕೆ.ಜಿ.

6.5 ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವವರು ಆಯ್ಕೆಗೆ ಅನರ್ಹರು:–

1. ತಾಗು ಮಂಡಿಗಳು (knock knees)
2. ಬಾಗಿದ ಕಾಲುಗಳು (Bow legs)
3. ಚಪ್ಪಟೆ ಪಾದ (Flat feet)
4. ನರ ಊತವಿರುವವರು (Varicose Veins)
5. ಮಾತನಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (impaediment in speech and hearing)
6. ಪುರುಷ ಅಭ್ಯರ್ಥಿಗಳಿಗೆ ಅಂಡವಾಯು (hydrocele in men)
7. ಬಣ್ಣ ಕುರುಡು/ಇರುಳು ಕುರುಡು (vision/colour blindness/night blindness)

6.6 ದೃಷ್ಟಿ ಸಾಮರ್ಥ್ಯ

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

ದೂರ ದೃಷ್ಟಿ (Distant vision)			ಸಮೀಪ ದೃಷ್ಟಿ (Near vision)		
ದೋಷರಹಿತ ಕಣ್ಣು (Better eye)	ಅಥವಾ	ದೋಷಪೂರಿತ ಕಣ್ಣು (Worse eye)	ದೋಷರಹಿತ ಕಣ್ಣು (Better eye)	ಅಥವಾ	ದೋಷಪೂರಿತ ಕಣ್ಣು (Worse eye)
6/6 ಮೀಟರ್	ಅಥವಾ	6/9 ಮೀಟರ್	0/6 ಮೀಟರ್	ಅಥವಾ	0/8 ಮೀಟರ್

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

6.7 ಶ್ರವಣಶಕ್ತಿ

ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ಸ್ ಟೆಸ್ಟ್
2. ವೆಬ್ಬರ್ಸ್ ಟೆಸ್ಟ್
3. ಟೆಸ್ಟ್ ಫಾರ್ ವರ್ಟಿಗೋ

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

ಈ ಎಲ್ಲಾ ಹಂತದ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆಯುತ್ತಾರೆ.

7.1 ಲಿಖಿತ ಪರೀಕ್ಷೆ:

ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ನೂರು (100) ಅಂಕಗಳದ್ದಾಗಿದ್ದು, ಅರುವತ್ತು (60) ನಿಮಿಷಗಳ ಅವಧಿಯಲ್ಲಿ ಉತ್ತರಿಸಬೇಕಾಗಿದೆ. ಪ್ರಶ್ನೆ ಪತ್ರಿಕೆಯು ಬಹು ಆಯ್ಕೆ (objective multiple choice) ಮಾದರಿಯದಾಗಿದ್ದು, ಇದು ಪ್ರಾಥಮಿಕ ಸಾಮಾನ್ಯ ಜ್ಞಾನ ಹಾಗೂ ಪ್ರಾಥಮಿಕ ಅಂಕಗಣಿತ ವಿಷಯವನ್ನು ಒಳಗೊಂಡಿರುತ್ತದೆ.

7.2 ವಿಶೇಷ ಸೂಚನೆಗಳು:– ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

7.3 7ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23–9–1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

8. ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ, ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

9. ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ:

9.1 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು **"ನಮೂನೆ–ಡಿ"** ರಲ್ಲಿ ಪಡೆದಿರಬೇಕು.

9.2 ಪರಿಶಿಷ್ಟ ಪಂಗಡಕ್ಕೆ ಸೇರಿದ ನಿಗದಿಪಡಿಸಿರುವ ಬುಡಕಟ್ಟು ಜನಾಂಗಗಳ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು.

10.0 ಗಮನಿಸಬೇಕಾದ ಮುಖ್ಯ ಅಂಶಗಳು:

10.1 ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

10.2 ನಿಗದಿತ ಅರ್ಜಿಯಲ್ಲಿ ಚಿತ್ತು ಅಥವಾ ಹೊಡೆದು ಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ, ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದ್ದಲ್ಲಿ ಮತ್ತೊಂದು ಅರ್ಜಿಯನ್ನು ತುಂಬಿ ಸಲ್ಲಿಸುವುದು ಅವಶ್ಯಕ. ಭರ್ತಿ ಮಾಡಿದ ಅರ್ಜಿಯಲ್ಲಿನ ವಿವರಗಳು ಸರಿಯಾಗಿದೆಯೇ ಎಂದು ಮನಗಂಡು ಆ ನಂತರ ಅರ್ಜಿಯನ್ನು ಸಲ್ಲಿಸುವುದು ಸೂಕ್ತ.

10.3 ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

10.4 ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ

ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳು ಹಾಗೂ ಅರ್ಜಿ ಭರ್ತಿ ಮಾಡುವ ವಿಧಾನದ ಕುರಿತು ಸೂಚಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

10.5 ಅಂಚೆ ಮೂಲಕ ಅಥವಾ ಇನ್ನಿತರೆ ಯಾವುದೇ ವ್ಯವಸ್ಥೆ ಮೂಲಕ ನಿಗದಿಪಡಿಸಿದ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಇಲಾಖೆಯು ಜವಾಬ್ದಾರಿಯಲ್ಲ.

10.6 ನಿಗದಿತ ನಮೂನೆಯಲ್ಲಿಲ್ಲದ ಅಥವಾ ಅಸ್ಪಷ್ಟ/ಅಪೂರ್ಣ ಮಾಹಿತಿ ಭರ್ತಿ ಮಾಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದೆ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10.7 ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

10.8 ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10.9 ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

10.10 ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

10.11 ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

10.12 ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

10.13 ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

10.14 ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

10.15 ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

10.16 ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31–3–2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

10.17 ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

10.18 ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು.

10.19 ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

10.20 ಯಾವುದೇ ಅಭ್ಯರ್ಥಿಗೆ ಪರೀಕ್ಷೆಗೆ ಹಾಜರಾಗಲು ಸೂಚನೆ/ತಿಳುವಳಿಕೆ ಪತ್ರ ಬರದಿದ್ದಲ್ಲಿ ಅಂತಹ ಅಭ್ಯರ್ಥಿಗಳು ಈ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿದ ಪಟ್ಟಿಯನ್ನು ನೋಡತಕ್ಕದ್ದು. ಹೀಗೆ ಪ್ರಕಟಿಸಿದ ಪಟ್ಟಿಯಲ್ಲಿ ಅವರ ಹೆಸರು ಇದ್ದರೆ ಕೆಳಸಹಿದಾರರನ್ನು ಸಂಪರ್ಕಿಸಿ ತಿಳುವಳಿಕೆ ಪತ್ರ / ಸೂಚನೆಯನ್ನು ಪಡೆದುಕೊಳ್ಳಬಹುದು. ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆ ಆಗದಿದ್ದ ಅಭ್ಯರ್ಥಿಗಳಿಗೆ ಈ ಪ್ರಾಧಿಕಾರದಿಂದ ಪ್ರತ್ಯೇಕವಾಗಿ ತಿಳುವಳಿಕೆ ನೀಡಲಾಗುವುದಿಲ್ಲ.

ಚಿಕ್ಕಮಗಳೂರು
ದಿನಾಂಕ:14–05–2012

ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರ
ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು.

ಕರ್ನಾಟಕ ಅರಣ್ಯ ಇಲಾಖೆ
ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು.
ಪರಿಶಿಷ್ಟ ಪಂಗಡದ (ಬ್ಯಾಕ್‌ಲಾಗ್) ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ

1. ನಿಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ.

ಅರ್ಜಿಯನ್ನು ಭರ್ತಿ ಮಾಡಲು ಸೂಚನೆಗಳು:–

ಅ) ಕನ್ನಡ ಭಾಷೆಯ ದಪ್ಪ ಅಥವಾ ಆಂಗ್ಲ ಭಾಷೆಯ Capital ಅಕ್ಷರಗಳಲ್ಲಿ ಭರ್ತಿ ಮಾಡಬೇಕು

ಆ) ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ ಹಾಗೂ ಅರ್ಜಿಯ ಜೊತೆಗೆ ಈ ಕೆಳಕಂಡ ದಾಖಲೆಗಳ ಪ್ರತಿಯನ್ನು ಲಗತ್ತಿಸಬೇಕು.

(1) 7ನೇ ತರಗತಿ ತೇರ್ಗಡೆ ಹೊಂದಿದ ಬಗ್ಗೆ ಅಂಕಪಟ್ಟಿ (2) ಜಾತಿ ಪ್ರಮಾಣ ಪತ್ರ (3) ಸ್ವವಿಳಾಸದ ಬಗ್ಗೆ ದಾಖಲೆ

ಇ) ಸೂಕ್ತ ಅಂಕಣವನ್ನು √ ಮಾಡಿ

ಈ) ಈ ಅರ್ಜಿಯನ್ನು ಮಡಚಬೇಡಿ, ಭಾವಚಿತ್ರಕ್ಕೆ ಪಿನ್ನು ಹಾಕಬೇಡಿ ಮತ್ತು ಸ್ವಚ್ಛವಾಗಿಡಿ.

ಉ) ನೇಮಕಾತಿ ಅಧಿಸೂಚನೆಯನ್ನು ಓದಿ ಚೆನ್ನಾಗಿ ಮನದಟ್ಟು ಮಾಡಿಕೊಂಡು ಅರ್ಜಿಯನ್ನು ಭರ್ತಿ ಮಾಡುವುದು.

2. ಅಭ್ಯರ್ಥಿಯ ಸಹಿ.

3. ಅಭ್ಯರ್ಥಿಯ ಹೆಸರು ತಂದೆಯ ಹೆಸರು ಮತ್ತು ಪೂರ್ಣ ಅಂಚೆ ವಿಳಾಸ (ಪಿನ್ ಕೋಡ್‌ನೊಂದಿಗೆ

4. ಅಭ್ಯರ್ಥಿಯ ಹೆಸರು (ಆಂಗ್ಲ ಭಾಷೆಯ CAPITAL ಅಕ್ಷರಗಳಲ್ಲಿ ಭರ್ತಿ ಮಾಡಬೇಕು)

5 ಮೊಬೈಲ್ ದೂರವಾಣಿ ಸಂಖ್ಯೆ

6 ಜನ್ಮ ದಿನಾಂಕ ದಿನ / ತಿಂಗಳು / ವರ್ಷ

7. ಲಿಂಗ ☐ ಪುರುಷ ☐ ಮಹಿಳೆ

8. ಪ್ರವರ್ಗ ☐ ಪರಿಶಿಷ್ಟ ಪಂಗಡ

9. ಭದ್ರಾ ವನ್ಯಜೀವಿ ವಿಭಾಗ ವ್ಯಾಪ್ತಿಯ ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರೇ ☐ ಹೌದು ☐ ಇಲ್ಲ

10. ಭದ್ರಾ ವನ್ಯಜೀವಿ ವಿಭಾಗ ವ್ಯಾಪ್ತಿಯ ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಹೆಸರನ್ನು √ ಮಾಡಿ

☐ Jenu Kuruba	☐ Kadu Kuruba	☐ Hakkipikki	☐ Soliga
☐ Soligaru	☐ Yerava	☐ Gowdlu	☐ Irular
☐ Iruliga	☐ Koraga	☐ Melakudi	☐ Malaikudi
☐ Maleru	☐ Meda	☐ Thoda	

11. ಭದ್ರಾ ವನ್ಯಜೀವಿ ವಿಭಾಗದ ವ್ಯಾಪ್ತಿಗೆ ಬರುವ ಚಿಕ್ಕಮಗಳೂರು, ತರೀಕೆರೆ, ನರಸಿಂಹರಾಜಪುರ, ಭದ್ರಾವತಿ, ಶಿವಮೊಗ್ಗ ಪೂರ್ಣ ಅಥವಾ ಭಾಗಶಃ ತಾಲ್ಲೂಕುಗಳಲ್ಲಿ 1 ರಿಂದ 7ನೇ ತರಗತಿಯವರೆಗೆ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವಿರಾ ☐ ಹೌದು ☐ ಇಲ್ಲ

12. ನೇಮಕಾತಿ ಲಿಖಿತ ಪರೀಕ್ಷೆಗೆ ಆಯ್ದುಕೊಂಡ ಮಾಧ್ಯಮ ☐ ಕನ್ನಡ ☐ ಆಂಗ್ಲ

ಘೋಷಣೆ:– ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ವಿವರಗಳು ಸತ್ಯ ಹಾಗೂ ಪರಿಪೂರ್ಣವಾಗಿರುತ್ತದೆ. ಅರ್ಜಿಯಲ್ಲಿ ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸುವ ಅಥವಾ ನನ್ನನ್ನು ಸೇವೆಯಿಂದ ಯಾವುದೇ ಮುನ್ಸೂಚನೆ ಇಲ್ಲದೆ ವಜಾ ಮಾಡಬಹುದು ಹಾಗೂ ನನ್ನ ವಿರುದ್ಧ ತತ್ಸಂಬಂಧ ಕ್ರಿಮಿನಲ್ ಕ್ರಮ ಕೈಗೊಳ್ಳಲು ಇಲಾಖೆಗೆ ಅಧಿಕಾರವಿದೆಯೆಂದು ಅರಿತಿದ್ದೇನೆ. ಅಲ್ಲದೆ, ನಾನು ಈವರೆಗೆ ಯಾವುದೇ ಕ್ರಿಮಿನಲ್ ಮೊಕದ್ದಮೆಗಳಲ್ಲಿ ವಿಚಾರಣೆಗೆ/ಶಿಕ್ಷೆಗೆ ಒಳಪಟ್ಟಿಲ್ಲವೆಂದು ದೃಢೀಕರಿಸುತ್ತೇನೆ.

ಸ್ಥಳ:
ದಿನಾಂಕ: **ಅಭ್ಯರ್ಥಿಯ ಸಹಿ.**

ಪಿ.ಆರ್. 83